# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಕೊಡಗು-ಮಡಿಕೇರಿ

## SC No. 84/2024

| | | | |
|---|---|---|---|
| ಸಾಕ್ಷಿದಾರರ ಹೆಸರು | : | **ಶ್ರೀ ರೋಹಿತ್** | **PW – 6** |
| ತಂದೆಯ ಹೆಸರು | : | **ರಾಜು** | **CW – 7** |
| ವಯಸ್ಸು | : | **36 ವರ್ಷ** | |
| ವೃತ್ತಿ | : | **ವ್ಯವಸಾಯ** | |
| ವಾಸ | : | **ಕುಸುಬೂರು ಗ್ರಾಮ, ಸೋಮವಾರಪೇಟೆ ತಾಲೂಕು** | |

**ಸಾಕ್ಷಿಯನ್ನು ದಿನಾಂಕ 09-03-2026 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.**

**ಮುಖ್ಯ ವಿಚಾರಣೆ: ಸರ್ಕಾರಿ ಅಭಿಯೋಜಕರಿಂದಃ**

1. ನನಗೆ ಚಾಸಾ-1 ಮತ್ತು ಚಾಸಾ-8 ಇವರ ಪರಿಚಯ ಇರುವುದಿಲ್ಲ. ಸುಮಾರು ಒಂದು ವರ್ಷದ ಹಿಂದೆ ಸೋಮವಾರಪೇಟೆಯ ಕೋವರ್ ಕೊಲ್ಲಿ ಯಲ್ಲಿ ಜನರ ಜೊತೆ ತೋಟಕ್ಕೆ ಹೋಗುತ್ತಿದ್ದಾಗ ಪೊಲೀಸರು ಪಂಚನಾಮೆಗೆ ಸಹಿ ಪಡೆದುಕೊಂಡಿರುತ್ತಾರೆ. ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ ಹಾಗೂ ಯಾವುದೇ ವಸ್ತುವನ್ನು ವಶಪಡಿಸಿಕೊಂಡಿರುವುದಿಲ್ಲ. ಪಂಚನಾಮೆಯನ್ನು **ನಿಪಿ-6** ಎಂದು ಗುರುತಿಸಲಾಯಿತು. ಅದರ ಮೇಲಿರುವ ಸಾಕ್ಷಿ ಸಹಿಯನ್ನು **ನಿಪಿ-6(ಎ)** ಎಂದು ಗುರುತಿಸಲಾಯಿತು. ಸಾಕ್ಷಿ ಪೊಟೋಗಳನ್ನು ನೋಡಿ ಗುರುತಿಸಿದ್ದು, ಪೊಟೋಗಳನ್ನು **ನಿಪಿ-7** ರಿಂದ **ನಿಪಿ-11** ಎಂದು ಗುರುತಿಸಲಾಯಿತು. ಪೊಟೋಗಳನ್ನು ಯಾವ ಕಾರಣಕ್ಕೆ ತೆಗೆದಿದ್ದಾರೆ

ಎಂದು ನನಗೆ ಗೊತ್ತಿಲ್ಲ.

**(ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು)**

**ಪಾಟೀ ಸವಾಲು– ಸರ್ಕಾರಿ ಅಭಿಯೋಜಕರಿಂದಃ**

1. ದಿನಾಂಕ 01.11.2023 ರಂದು ಬಸವನಹಳ್ಳಿ ಗ್ರಾಮದ ಚೆನ್ನಮ್ಮ ರವರ ಮನೆಯ ಮುಂದೆ ಸಾರ್ವಜನಿಕ ರಸ್ತೆಯಲ್ಲಿ ಪಿರ್ಯಾದಿ ನಂದೀಶ್ ಇವರು ಹಾಜರಾಗಿದ್ದು, ಆರೋಪಿತರು ತನಗೆ ಹಲ್ಲೆ ಮಾಡಿದ್ದ ಸ್ಥಳ ಎಂದು ತೋರಿಸಿದ ಮೇರೆಗೆ ಪೊಲೀಸರು ನಿಪಿ–6 ರಂತೆ ಪಂಚನಾಮೆ ಮಾಡಿ ಒಂದು ಶರ್ಟ್ ಮತ್ತು ಬೀರ್ ಬಾಟಲ್ ವಶಪಡಿಸಿಕೊಂಡರು ಎಂದು ಸೂಚಿಸುವುದು ಸರಿಯಲ್ಲ. ಪಂಚನಾಮೆ ಕಾಲಕ್ಕೆ ಪೊಲೀಸರು ನಿಪಿ–7 ರಿಂದ ನಿಪಿ–11 ರಂತೆ ಪೊಟೋಗಳನ್ನು ತೆಗೆದಿದ್ದಾರೆ ಎಂದು ಸೂಚಿಸುವುದು ಸರಿಯಲ್ಲ. ಆ ಬಗ್ಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ನಾನು ಪೊಲೀಸರ ಮುಂದೆ ಈಗೆ ಓದಿ ಹೇಳಿದಂತೆ "ನಾನು ಮೇಲ್ಕಂಡ ವಿಳಾಸದಲ್ಲಿ........................ನೀಡಿದ ಹೇಳಿಕೆ." ಎಂದು ಹೇಳಿಕೆ ಕೊಟ್ಟಿರುವುದಿಲ್ಲ. ಸದರಿ ಹೇಳಿಕೆಯನ್ನು **ನಿಪಿ–12** ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು– 1 ರಿಂದ 3 ನೇ ಆರೋಪಿತರ ಪರ ವಕೀಲರಾದ ಶ್ರೀ. ಕೆ.ಎ.ಕೆ.ಆರ್ ರವರಿಂದಃ**

ಆರೋಪಿತರ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿದ್ದರಿಂದ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ** ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ. ಹೇ. ಕೇ. ಸರಿ ಇದೆ.

ಸಹಿ/–

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಕೊಡಗು–ಮಡಿಕೇರಿ.